# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 544 |
| 2) ಮಾನ್ಯ ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| 3) ಉತ್ತರಿಸುವ ದಿನಾಂಕ | : | 20/08/2026 |
| 4) ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಒಟ್ಟು 'ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆ'ಗಳ ಸಂಖ್ಯೆ ಎಷ್ಟು; | ಕರ್ನಾಟಕ ರಾಜ್ಯದಲ್ಲಿ ಒಟ್ಟು 12 ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಗಳು ಮತ್ತು 04 ಭಾರತೀಯ ಮೀಸಲು ಪಡೆಗಳು ಕಾರ್ಯನಿರ್ವಹಿಸುತ್ತಿವೆ. |
| ಆ) | ಕಲ್ಯಾಣ ಕರ್ನಾಟಕ ಭಾಗದಲ್ಲಿರುವ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಗಳ ಸಂಖ್ಯೆ ಎಷ್ಟು; | ಕಲ್ಯಾಣ ಕರ್ನಾಟಕ ಭಾಗದಲ್ಲಿ 06ನೇ ಪಡೆ ಕೆ.ಎಸ್.ಆರ್.ಪಿ., ಕಲಬುರಗಿ ಮತ್ತು 01-ಐ.ಆರ್.ಬಿ. ಪಡೆ, ಮುನಿರಾಬಾದ್ ಕಾರ್ಯನಿರ್ವಹಿಸುತ್ತಿವೆ. |
| ಇ) | ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಿಗೆ ಕಾನೂನು ಸುವ್ಯವಸ್ಥೆಗಳನ್ನು ಕಾಪಾಡುವ ಸಮಯದಲ್ಲಿ ಕೆ.ಎಸ್.ಆರ್.ಪಿ. ತುಕಡಿಗಳನ್ನು ನೆರೆಯ ಜಿಲ್ಲೆಯ ಕಲಬುರಗಿ ಘಟಕದಿಂದ ನಿಯೋಜಿಸಲಾಗುತ್ತಿದ್ದು, ಸದರಿ ಸ್ಥಳದಿಂದ ಜಿಲ್ಲೆಯನ್ನು ತಲುಪಲು ಅಂದಾಜು ಸುಮಾರು 4.00 ರಿಂದ 4.30 ಘಂಟೆಗಳ ಸಮಯ ತಗುಲಲಿದ್ದು, ಇದರಿಂದ ತುರ್ತುಸೇವೆ ಒದಗಿಸಲು ಕಷ್ಟಸಾಧ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಈ) | ರಾಯಚೂರು ಜಿಲ್ಲೆಯ ಕಾನೂನು ಸುವ್ಯವಸ್ಥೆ, ಬಂದೋಬಸ್ತು, ವಿ.ವಿ.ಐ.ಪಿ. ಭದ್ರತೆ, ಜಿಲ್ಲೆಯ ಸುರಕ್ಷಿತ ಹಾಗೂ ಗಡಿ ಭಾಗದ ಕುರಿತು ಸುರಕ್ಷತೆಗಾಗಿ ರಾಯಚೂರು ಜಿಲ್ಲೆಯಲ್ಲಿ 13ನೇ ಕೆ.ಎಸ್.ಆರ್.ಪಿ. ಪಡೆಯನ್ನು ಸ್ಥಾಪಿಸುವ ಕುರಿತ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;<br>ಇದ್ದಲ್ಲಿ ಯಾವ ಹಂತದಲ್ಲಿದೆ ಹಾಗೂ ಯಾವ ಕಾಲಮಿತಿಯೊಳಗೆ ರಾಯಚೂರು ಜಿಲ್ಲೆಯಲ್ಲಿ ಹೊಸ ಕೆ.ಎಸ್.ಆರ್.ಪಿ. ಪಡೆಯನ್ನು ಸ್ಥಾಪಿಸಲಾಗುವುದು? | ರಾಯಚೂರು ಜಿಲ್ಲೆಯಲ್ಲಿ ಕೆ.ಎಸ್.ಆರ್.ಪಿ. ಪಡೆಯನ್ನು ಸ್ಥಾಪಿಸುವ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, 2025-26ನೇ ಸಾಲಿನಲ್ಲಿ ರಾಜ್ಯ ಕೆ.ಎಸ್.ಆರ್.ಪಿ. ಘಟಕದಲ್ಲಿ 02 ಭಾರತೀಯ ಮೀಸಲು ಪಡೆಗಳನ್ನು ಒಟ್ಟಾರೆ 2014 ಹುದ್ದೆಗಳೊಂದಿಗೆ ಸೃಜಿಸಲು ಸಹಮತಿ ನೀಡಲಾಗಿದ್ದು, ಸದರಿ 02 ಭಾರತೀಯ ಮೀಸಲು ಪೊಲೀಸ್ ಪಡೆಗಳು ಪೂರ್ಣ ಪ್ರಮಾಣದಲ್ಲಿ ಕಾರ್ಯಾರಂಭಗೊಳ್ಳಬೇಕಾಗಿರುವುದರಿಂದ ಹೊಸದಾಗಿ ಕೆ.ಎಸ್.ಆರ್.ಪಿ. ಪಡೆಯನ್ನು ಸೃಜಿಸುವ ಪ್ರಸ್ತಾವನೆಯನ್ನು ಪರಿಗಣಿಸಲು ಅವಕಾಶವಿರುವುದಿಲ್ಲ. |

**ಸಂಖ್ಯೆ: ಹೆಚ್‌ಡಿ 123 ಪಿಒಪಿ 2026**

(ಪ್ರಿಯಾಂಕ್ ಖರ್ಗೆ)
ಗೃಹ ಸಚಿವರು.